# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ.29 ಕಾಚರಕನಹಳ್ಳಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕುವೆಂಪು ಪಾರ್ಕ್ ಪಕ್ಕದಲ್ಲಿರುವ ಪಾಲಿಕೆ ಕಟ್ಟಡದಲ್ಲಿ ದಿನಾಂಕ: 19-03-2022 ರಂದು ನಡೆದ ವಾರ್ಡ್ ಕಮಿಟಿ ಸಭೆಯ ನಡವಳಿಗಳು

**ಹಾಜರಿದ್ದ ಸದಸ್ಯರು,**

1. ಶ್ರೀ ಪ್ರಸನ್ನಕುಮಾರ್ ಪ್ರವೀಣ್ ಎ, ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಹೆಚ್.ವಿ.ಕೃಷ್ಣಾರೆಡ್ಡಿ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ಡಾ॥ ರೇಚಲ್, ವೈದ್ಯಾಧಿಕಾರಿಗಳು, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
4. ಶ್ರೀ ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು ಹಾಗೂ ಸದಸ್ಯರು,
5. ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ)
6. ಶ್ರೀ ಪ್ರಸನ್ನ, ಸದಸ್ಯರು, ಹೆಚ್.ಬಿ.ಆರ್ ಬಡಾವಣೆ ಅಸೋಸಿಯೇಷನ್(ರಿ)
7. ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್(ರಿ)
8. ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)

**ಹಾಜರಿದ್ದ ಅಧಿಕಾರಿಗಳು**

1. ಶ್ರೀ ರಾಜಶೇಖರ್, ಕಂದಾಯ ನಿರೀಕ್ಷಕರು,
2. ಶ್ರೀ ರಾಜೇಶ್, ಕಿರಿಯ ಆರೋಗ್ಯ ನಿರೀಕ್ಷಕರು,
3. ಕುಮಾರಿ ರಜನಿ, ಇಂಜಿನಿಯರ್, ಬಿಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ,
4. ಮಾರ್ಷಲ್, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
5. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಸಂಚಾರ ಮತ್ತು ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೊಲೀಸ್ ಠಾಣೆ,
6. ಶ್ರೀ ಪುಟ್ಟಸ್ವಾಮಿ, ಬೆಸ್ಕಾಂ ಇಲಾಖೆ,
7. ಶ್ರೀಮತಿ ರಾಜೇಶ್ವರಿ, ಕಲ್ಯಾಣ ಇಲಾಖೆ,
8. ಶ್ರೀ ವೆಂಕಟೇಶ್, ತೋಟಗಾರಿಕೆ ಇಲಾಖೆ,
9. ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ,

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

**ಸಭೆಯ ನಡವಳಿಗಳು**

1) **ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ)** ರವರು ಮಾತನಾಡಿ, ವಾರ್ಡ್ ಪ್ರದೇಶದಲ್ಲಿ ಮೂರು ಕಡೆ ರಸ್ತೆ ನಾಮ ಫಲಕಗಳು ಉರುಳಿ ಬಿದ್ದಿರುತ್ತವೆ ಇವುಗಳನ್ನು ನೆಡಲು ಪ್ರಸ್ತಾಪಿಸಿದಾಗ ಈ ಬಗ್ಗೆ ಚರ್ಚಿಸಲಾಗಿ, ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರು ವಾರ್ಡ್ ಪ್ರದೇಶಕ್ಕೆ ಟ್ರಾಕ್ಟರ್ ಗ್ಯಾಂಗ್‌ಮೆನ್ ಅವಧಿ ಮುಗಿದಿದ್ದು, ಈವರೆವಿಗೆ ಎರಡು ಬಾರಿ ಟೆಂಡರ್ ಕರೆಯಲಾಗಿದ್ದರೂ ಸಹ ಟೆಂಡರ್‌ನಲ್ಲಿ ಯಾವ ಗುತ್ತಿಗೆದಾರರೂ ಭಾಗವಹಿಸದೇ ಇರುವುದರಿಂದ 3ನೇ ಕರೆಯನ್ನೂ ಸಹ ಕರೆಯಲಾಗಿದ್ದು, ಟೆಂಡರ್ ಪ್ರಕ್ರಿಯೆ ಮುಗಿದ ನಂತರ ಗುತ್ತಿಗೆದಾರರನ್ನು ಗುರುತಿಸಿದ ನಂತರ ನಾಮಫಲಕಗಳ ನೆಡುವ ಕಾಮಗಾರಿಯನ್ನು ತುರ್ತಾಗಿ ಕೈಗೊಳ್ಳಲಾಗುವುದು ಎಂದು ಸಭೆಗೆ ತಿಳಿಸಿದರು.



Scanned with CamScanner

2) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)** ರವರು ಮಾತನಾಡಿ, ವಾರ್ಡ್ ಪ್ರದೇಶದ ರಾಮಯ್ಯ ಬಡಾವಣೆ ಹಾಗೂ ಅಜ್ಜಲ್ಲಪ್ಪ ಬಡಾವಣೆಯಲ್ಲಿ 06 ವಿದ್ಯುತ್ ದೀಪಗಳು ಉರಿಯುತ್ತಿರುವುದಿಲ್ಲ ಎಂದು ಸಭೆಯಲ್ಲಿ ತಿಳಿಸಿದಾಗ, ಸಭೆಯಲ್ಲಿ ಕೂಲಂಕುಷವಾಗಿ ಚರ್ಚಿಸಿ, ಈ ಬಗ್ಗೆ ಮುಂದಿನ ಸಭೆಗೆ ಬೀದಿ ದೀಪಗಳ ವಿಭಾಗದ ಅಭಿಯಂತರರನ್ನು ಆಹ್ವಾನಿಸಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು.

3) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)** ರವರು ಮಾತನಾಡಿ, ವಾರ್ಡ್ ಪ್ರದೇಶದ ಹೆಚ್ಚು ಸಂಚಾರವಿರುವ ಪ್ರಮುಖ ರಸ್ತೆಗಳಲ್ಲಿ ಒಂದಾದ ಕಮ್ಮನಹಳ್ಳಿ ಮುಖ್ಯರಸ್ತೆಯಲ್ಲಿ ನೋ ಪಾರ್ಕಿಂಗ್ ನಾಮಫಲಕಗಳನ್ನು ಅಳವಡಿಸಿದಲ್ಲಿ ಸಾರ್ವಜನಿಕರು ಯದ್ವಾ ತದ್ವ ಕಮ್ಮನಹಳ್ಳಿ ಮುಖ್ಯರಸ್ತೆಯಲ್ಲಿ ವಾಹನ ನಿಲುಗಡೆ ಮಾಡುವುದನ್ನು ನಿಯಂತ್ರಿಸಲಾಗುವುದು.. ಇದರಿಂದ ಸಾರ್ವಜನಿಕರಿಗೆ ಆಗುವ ತೊಂದರೆಗಳನ್ನು ನಿವಾರಿಸಬಹುದಾಗಿರುತ್ತದೆ ಎಂದು ಸಭಾ ಗಮನಕ್ಕೆ ತಂದಾಗ ಈ ಬಗ್ಗೆ ಚರ್ಚಿಸಲಾಗಿ ಸಭೆಯಲ್ಲಿ ಹಾಜರಿದ್ದ ಸಂಚಾರಿ ಪೊಲೀಸ್ ಅಧಿಕಾರಿಗಳಿಗೆ **ನೋ ಪಾರ್ಕಿಂಗ್** ಫಲಕಗಳನ್ನು ಅಳವಡಿಸಲು ಸಭೆಯು ಸರ್ವಾನುಮತದಿಂದ ಸೂಚಿಸಿತು.

4) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)** ರವರು ಮಾತನಾಡಿ, ರಾಮಯ್ಯ ಬಡಾವಣೆಯಲ್ಲಿ ಇರುವ ಸಮ್ ಓವರ್ ರೆಸ್ಟೋರೆಂಟ್ ಹತ್ತಿರ ಹೆಚ್ಚು ಜನಜಂಗುಳಿ ಇದ್ದು ಈ ರೆಸ್ಟೋರೆಂಟ್‌ಗೆ ಬರುವ ಸಾರ್ವಜನಿಕರು ದ್ವಿಚಕ್ರ ವಾಹನಗಳನ್ನು ರಸ್ತೆಯಲ್ಲೇ ನಿಲ್ಲಿಸಿ, ಸಾರ್ವಜನಿಕ ಓಡಾಟಕ್ಕೆ ಅಡಚಣೆ ಮಾಡಿ, ಕಾಫಿ, ಟೀ ಇತ್ಯಾದಿಗಳನ್ನು ಹೋಟಲ್ ಹೊರಗೆ ಬಂದು ಸೇವಿಸುತ್ತಿರುತ್ತಾರೆ. ಈ ಬಗ್ಗೆ ಕ್ರಮ ವಹಿಸಲು ಕೋರಿದಾಗ, ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ನಿರೀಕ್ಷಕರು ರೆಸ್ಟೋರೆಂಟ್ ಮಾಲೀಕರಿಗೆ ತಿಳುವಳಿಕೆ ನೀಡುವುದಾಗಿ ಸಭೆಗೆ ತಿಳಿಸಿದರು ಹಾಗೂ ಸಭೆಯಲ್ಲಿ ಹಾಜರಿದ್ದ ಕಾನೂನು ಸುವ್ಯವಸ್ಥೆ ಪೊಲೀಸ್ ಅಧಿಕಾರಿಗಳು ಹೊಯ್ಸಳ ವಾಹನದ ಗಸ್ತನ್ನು ತೀವ್ರಗೊಳಿಸಲಾಗುವುದು ಎಂದು ಸಭೆಗೆ ತಿಳಿಸಿದರು.

5) **ಡಾ॥ ರೇಜಲ್, ವೈದ್ಯಾಧಿಕಾರಿಗಳು, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ ರವರು ಮಾತನಾಡಿ,** ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ ಆಸ್ಪತ್ರೆಯಲ್ಲಿ 12 ರಿಂದ 14 ವರ್ಷಗಳ ಮಕ್ಕಳಿಗೆ ಕೋವಿಡ್-19 ವ್ಯಾಕ್ಸಿನೇಷನ್ ಅನ್ನು ನೀಡಲಾಗುತ್ತಿದೆ ಎಂದು ಸಭೆಗೆ ತಿಳಿಸಿದರು ಮತ್ತು ಕೋವಿಡ್-19ರ ಪರೀಕ್ಷೆಗಳನ್ನು ಮುಂದುವರೆಸುತ್ತಿರುವುದಾಗಿ ಸಭೆಗೆ ತಿಳಿಸಿದರು.

6) **ಹಿರಿಯ ಆರೋಗ್ಯ ನಿರೀಕ್ಷಕರು** ಮಾತನಾಡಿ, ವಾರ್ಡ್ ಪ್ರದೇಶದಲ್ಲಿ ಹಾಲಿ ಇರುವ ಪೌರಕಾರ್ಮಿಕರಲ್ಲಿ 20 ಜನ ನಿವೃತ್ತಿ ಹೊಂದಿರುತ್ತಾರೆ, 02 ಮರಣ ಹೊಂದಿರುತ್ತಾರೆ, 80 ಜನ ಪೌರಕಾರ್ಮಿಕರು ಮಾತ್ರ ಕೆಲಸ ನಿರ್ವಹಿಸುತ್ತಿದ್ದು, ನಿಯಮಾನುಸಾರ ಇನ್ನೂ 13 ಜನ ಪೌರ ಕಾರ್ಮಿಕರ ಅವಶ್ಯಕತೆ ಇರುತ್ತದೆ ಎಂದು ಸಭಾ ಗಮನಕ್ಕೆ ತಂದಾಗ ಈ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿ, ಮೇಲಾಧಿಕಾರಿಗಳ ಗಮನಕ್ಕೆ ತರಲು ಸಭೆಯು ಸರ್ವಾನುಮತಿದಿಂದ ಅಂಗೀಕರಿಸಿತು.

7) ವಾರ್ಡ್ ಪ್ರದೇಶದಲ್ಲಿ ಹೆಚ್ಚು ಸಂಚಾರವಿರುವ ರಸ್ತೆಗಳಲ್ಲಿ ರಸ್ತೆ ಉಬ್ಬರಗಳನ್ನು ನಿರ್ಮಿಸುವ ಬಗ್ಗೆ ಸಂಚಾರಿ ಪೊಲೀಸ್ ಅಧಿಕಾರಿಗಳು ಸಭಾ ಗಮನಕ್ಕೆ ತಂದಾಗ ಸಭೆಯಲ್ಲಿ ಹಾಜರಿದ್ದ ಎಲ್ಲಾ ವಾರ್ಡ್ ಸಮಿತಿ ಸದಸ್ಯರುಗಳು ವಾರ್ಡ್ ಪ್ರದೇಶದಲ್ಲಿ ರಸ್ತೆ ಉಬ್ಬರಗಳನ್ನು ನಿರ್ಮಿಸುವುದು ಅತ್ಯವಶ್ಯಕವಿದ್ದು, ಈ ಬಗ್ಗೆ ಅನೇಕ ಬಾರಿ ಸಭೆಗಳಲ್ಲಿ ಪ್ರಸ್ತಾಪಿಸಿ, ಚರ್ಚಿಸಲಾಗುತ್ತಿರುತ್ತದೆ ಮತ್ತು ಸಂಬಂಧಪಟ್ಟ ಟ್ರಾಫಿಕ್ ಇಂಜಿನಿಯರಿಂಗ್ ಸೆಲ್ ರವರಿಗೆ ವಾರ್ಡ್ ಪ್ರದೇಶವನ್ನು ಪರಿಶೀಲಿಸಿ, ಪೊಲೀಸರ

Scanned with CamScanner

ಸಹಕಾರದೊಂದಿಗೆ ಅವಶ್ಯಕತೆ ಇರುವ ಕಡೆಗಳಲ್ಲಿ ರಸ್ತೆ ಉಬ್ಬರಗಳನ್ನು ವೈಜ್ಞಾನಿಕವಾಗಿ ನಿರ್ಮಿಸಲು ಟ್ರಾಫಿಕ್ ಇಂಜಿನಿಯರಿಂಗ್ ಸೆಲ್ ರವರಿಗೆ ಪತ್ರ ಬರೆದಿದ್ದರೂ ಸಹ ಈ ವರೆವಿಗೆ ಯಾವುದೇ ಕ್ರಮ ವಹಿಸಿರುವುದಿಲ್ಲ. ಆದ್ದರಿಂದ ಕೂಡಲೇ ಕ್ರಮ ವಹಿಸಲು ಕೋರಿ ಸಭೆಯು ಸರ್ವಾನುಮತದಿಂದ ಸೂಚಿಸಿತು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

Prasanna Kumar. A

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

ಪ್ರತಿಯನ್ನು

1) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
4) ವಾರ್ಡ್ ಕಮಿಟಿಯ ಸದಸ್ಯರಿಗೆ.

Scanned with CamScanner